# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1082 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.12.2021 |
| ಉತ್ತರಿಸುವ ಸಚಿವರು | : | ಪಶುಸಂಗೋಪನೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುಚ್ಛೆದ 371 (ಜೆ) ರಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ 32 ಪಶು ವೈದ್ಯಕೀಯ ಪರೀಕ್ಷಕರ ಹಾಗೂ 83 ಪಶು ವೈದ್ಯಕೀಯ ಸಹಾಯಕರ ಹುದ್ದೆಗಳನ್ನು ತುಂಬಲು ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಈ ಹುದ್ದೆಗೆ ಪರೀಕ್ಷೆ ನಡೆಸದೆ ನೇರವಾಗಿ ಮೂಲ ದಾಖಲಾಗಿ ಪರಿಶೀಲನೆಗೆ ಯಾವ ಆಧಾರದ ಮೇಲೆ ಕರೆಯಲಾಗಿದೆ; | ಸರ್ಕಾರದ ವಿಶೇಷ ನೇಮಕಾತಿ ನಿಯಮದ ಅಧಿಸೂಚನೆ ಸಂಖ್ಯೆ:ಪಸಂಮೀ 26 ಪಅವಿ 2018, ದಿನಾಂಕ:11-02-2020 ರಂತೆ ಕಲ್ಯಾಣ-ಕರ್ನಾಟಕ 371(ಜೆ) ರಡಿ ಖಾಲಿ ಇರುವ 32 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳ ಹಾಗೂ ಪಶುವೈದ್ಯಕೀಯ ಸಹಾಯಕರುಗಳ 83 ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮ ರಚನೆಯಾಗಿದ್ದು, ಅದರಂತೆ ಅಧಿಸೂಚನೆ ಸಂಖ್ಯೆ:ಆಪಸಂ/ಸಿಬ್ಬಂದಿ-3(2)/ವಿವ-69/2020-21, ದಿನಾಂಕ:26-06-2020ರಂತೆ ಆನ್ ಲೈನ್ ಮುಖೇನ ಅರ್ಜಿಗಳನ್ನು ಆಹ್ವಾನಿಸಿದ್ದು, ಬಂದಂತಹ ಅರ್ಜಿಗಳಲ್ಲಿ ಮೀಸಲಾತಿ ಮತ್ತು ಮೇರಿಟ್ ಆಧಾರಿತ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆ ನಡೆಯುತ್ತಿದೆ. |
| ಇ) | ಈ ನೇಮಕಾತಿ ಅಧಿಸೂಚನೆ ಹಾಗೂ ಮಾರ್ಗ ಸೂಚಿಗಳು ಪಶುಸಂಗೋಪನಾ ಇಲಾಖೆಯಿಂದ ಅಳವಡಿಸಲಾಗಿದೆಯೇ; ಅಳವಡಿಸಲಾಗಿದ್ದಲ್ಲಿ, ವಿವರ ನೀಡುವುದು | ನೇಮಕಾತಿ ಕುರಿತಂತೆ ಇಲಾಖೆಯಲ್ಲಿ ವಿಶೇಷ ನೇಮಕಾತಿ ನಿಯಮವನ್ನು ಅಳವಡಿಸಲಾಗಿದೆ. ವಿಶೇಷ ನೇಮಕಾತಿ ನಿಯಮದ ಅಧಿಸೂಚನೆಯನ್ನು ಲಗತ್ತಿಸಿದೆ |

| | | |
|---|---|---|
| ಈ) | ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಬಂದಂತಹ ಅಭ್ಯರ್ಥಿಗಳ ಅಂಕ ಪಟ್ಟಿ ಹಾಗೂ ವರ್ಗವಾರು ವಿವರ ನೀಡುವುದು? | ಮೀಸಲಾತಿ ಮತ್ತು ಮೇರಿಟ್ ಆಧಾರಿತ ಅರ್ಹ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆ ಪ್ರಕ್ರಿಯೆ ನಡೆಯುತ್ತಿದೆ. ಅರ್ಹ ಅಭ್ಯರ್ಥಿಗಳ ಆಯ್ಕೆಯ ತಾತ್ಕಾಲಿಕ ಪಟ್ಟಿ ಪ್ರಕಟಿಸಿರುವುದಿಲ್ಲ. |

ಸಂ: ಪಸಂಮೀ ಇ-190 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 26 ಪಅವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 11.02.2020

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (2) ನೇ ಉಪ-ಪ್ರಕರಣದ (ಎ) ಖಂಡದ ಮೂಲಕ ಅಗತ್ಯ ಪಡಿಸಲಾದಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಚಿಸಲು ಪ್ರಸ್ತಾಪಿಸಿರುವ ಕರ್ನಾಟಕ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ (ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳಲ್ಲಿನ ಪಶು ವೈದ್ಯಕೀಯ ಪರೀಕ್ಷಕರುಗಳ ಹಾಗೂ ಪಶುವೈದ್ಯಕೀಯ ಸಹಾಯಕರುಗಳ ನೇಮಕಾತಿ) (ವಿಶೇಷ) ನಿಯಮಗಳು, 2019 ರ ಕರಡನ್ನು ದಿನಾಂಕ: 06ನೇ ನವೆಂಬರ್ 2019 ರಂದು ಹೊರಡಿಸಿ, ಕರ್ನಾಟಕ ರಾಜ್ಯ ಪತ್ರ ಭಾಗ-4 ಎ ಸಂ. (441) 2984 ರಲ್ಲಿ ಅಧಿಸೂಚನೆ ಸಂಖ್ಯೆ: ಪಸಂಮೀ 26 ಪಅವಿ 2018, ದಿನಾಂಕ: 07ನೇ ನವೆಂಬರ್ 2019 ರಲ್ಲಿ ಪ್ರಕಟಿಸಲಾಗಿದ್ದು, ಅದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ, ಅದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ/ ಸಲಹೆಗಳನ್ನು ಆಹ್ವಾನಿಸಲಾಗಿತ್ತು.

ಸದರಿ ರಾಜ್ಯಪತ್ರವನ್ನು ದಿನಾಂಕ: 07ನೇ ನವೆಂಬರ್ 2019 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗಿತ್ತು.

ಸದರಿ ಪ್ರಕಟಣೆಗಳಿಗೆದುರಾಗಿ ಆಕ್ಷೇಪಣೆ ಮತ್ತು ಸೂಚನೆಗಳು ರಾಜ್ಯ ಸರ್ಕಾರದಿಂದ ಸ್ವೀಕರಿಸಲ್ಪಟ್ಟಿದ್ದು, ಅವುಗಳನ್ನು ಪರಿಶೀಲಿಸಲಾಗಿ ಅವು ಸಲಹಾತ್ಮಕ/ ಸೂಚನಾತ್ಮಕವಾಗಿವೆ. ಆದ್ದರಿಂದ ಎಲ್ಲಾ ಆಕ್ಷೇಪಣೆಗಳನ್ನು ತಳ್ಳಿಹಾಕಲಾಗಿದೆ.

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (1) ನೇ ಉಪ-

ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಮುಂದಿನ ನಿಯಮಗಳನ್ನು ರಚಿಸಿದೆ. ಎಂದರೆ:-

ನಿಯಮಗಳು

1. **ಶೀರ್ಷಿಕೆ, ಪ್ರಾರಂಭ ಮತ್ತು ಅನ್ವಯ.**- (1) ಈ ನಿಯಮಗಳನ್ನು ಕರ್ನಾಟಕ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ (ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳ ಪಶುವೈದ್ಯಕೀಯ ಪರೀಕ್ಷಕರು ಹಾಗೂ ಪಶುವೈದ್ಯಕೀಯ ಸಹಾಯಕರುಗಳ ನೇಮಕಾತಿ) (ವಿಶೇಷ) ನಿಯಮಗಳು, 2019 ಎಂದು ಕರೆಯತಕ್ಕದ್ದು.

(2) ಅವು, ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಅಂತಿಮ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

(3) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಅಥವಾ ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಆಯ್ಕೆಯ ಮೂಲಕ ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2006 ಅಥವಾ ಕರ್ನಾಟಕ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ (ನೇಮಕಾತಿ) ನಿಯಮಗಳು, 1965 ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14) ರ ಮೇರೆಗೆ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳ ಪ್ರವರ್ಗಗಳಿಗೆ ಸಂಬಂಧಿಸಿದಂತೆ ರಚಿಸಲಾದ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ ಯಾವುದೇ ಇತರ ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಈ ನಿಯಮಗಳ ಉಪಬಂಧಗಳು, ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಯಲ್ಲಿ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳಲ್ಲಿರುವ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳ ಪ್ರವರ್ಗಗಳಲ್ಲಿ ಖಾಲಿ ಇರುವ 32 ಹುದ್ದೆಗಳ ಹಾಗೂ ಪಶುವೈದ್ಯಕೀಯ ಸಹಾಯಕರುಗಳ 83 ಹುದ್ದೆಗಳ ನೇರನೇಮಕಾತಿಗೆ ಅನ್ವಯವಾಗತಕ್ಕದ್ದು.

ಪರಂತು, ಈ ನಿಯಮಗಳಲ್ಲಿರುವುದು ಯಾವುದೂ, ಒಂದಕ್ಕಿಂತ ಹೆಚ್ಚಿನ ನೇಮಕಾತಿಗೆ ಅನ್ವಯವಾಗತಕ್ಕದ್ದಲ್ಲ.

2. ಪರಿಭಾಷೆಗಳು.- (1) ಈ ನಿಯಮಗಳಲ್ಲಿ ಸಂದರ್ಭವು, ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ನೇಮಕಾತಿ ಪ್ರಾಧಿಕಾರ" ಎಂದರೆ, ಈ ನಿಯಮಗಳ ಮೇರೆಗೆ ಪಶುವೈದ್ಯಕೀಯ ಪರೀಕ್ಷಕರುಗಳ ಮತ್ತು ಪಶುವೈದ್ಯಕೀಯ ಸಹಾಯಕರುಗಳ ನೇಮಕಾತಿಗಾಗಿ ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ;

(ಬಿ) "ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳು" ಎಂದರೆ, ನೇರನೇಮಕಾತಿ ಮೂಲಕ ಭರ್ತಿ ಮಾಡಬೇಕಾದ ಪಶುವೈದ್ಯಕೀಯ ಪರೀಕ್ಷಕರ ಮತ್ತು ಪಶುವೈದ್ಯಕೀಯ ಸಹಾಯಕರ ವೃಂದದಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶದ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಮೇರೆಗೆ ರಚಿಸಲಾದ ಸ್ಥಳೀಯ ವೃಂದ;

(ಸಿ) "ಅರ್ಹತಾ ಪರೀಕ್ಷೆ" ಎಂದರೆ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಪಶುವೈದ್ಯಕೀಯ ಪರೀಕ್ಷಕರು ಹಾಗೂ ಪಶುವೈದ್ಯಕೀಯ ಸಹಾಯಕರುಗಳ ಹುದ್ದೆಗಳ ನೇರನೇಮಕಾತಿಗಾಗಿ ನಿರ್ದಿಷ್ಟಪಡಿಸಿದ ಕನಿಷ್ಠ ವಿದ್ಯಾರ್ಹತೆ;

(ಡಿ) "ಅನುಸೂಚಿ" ಎಂದರೆ, ಈ ನಿಯಮಗಳಿಗೆ ಅನುಬಂಧಿಸಿದ ಅನುಸೂಚಿ;

(ಇ) "ಆಯ್ಕೆ ಸಮಿತಿ" ಎಂದರೆ, 3ನೇ ನಿಯಮದ ಮೇರೆಗೆ ರಚಿಸಲಾದ ಆಯ್ಕೆ ಸಮಿತಿ;

(ಎಫ್) "ಖಾಲಿ ಹುದ್ದೆಗಳು" ಎಂದರೆ, ಈ ನಿಯಮಗಳ ಮೇರೆಗೆ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳ ಸಂಖ್ಯೆ.

(2) ಈ ನಿಯಮಗಳಲ್ಲಿ ಬಳಸಲಾಗಿರುವ ಆದರೆ ಪರಿಭಾಷಿಸಿಲ್ಲದ ಪದಗಳು ಮತ್ತು ಅಭಿವ್ಯಕ್ತಿಗಳು ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ಅವುಗಳಿಗೆ ಕೊಟ್ಟಿರುವ ಅರ್ಥವನ್ನೇ ಹೊಂದಿರತಕ್ಕದ್ದು.

3. **ಆಯ್ಕೆ ಸಮಿತಿ.**- ಈ ನಿಯಮಗಳ ಮೇರೆಗೆ ಪಶುವೈದ್ಯಕೀಯ ಪರೀಕ್ಷಕರ ಗ್ರೇಡ್-II ಹಾಗೂ ಪಶುವೈದ್ಯಕೀಯ ಸಹಾಯಕರುಗಳ ಹುದ್ದೆಗಳ ಪ್ರವರ್ಗಗಳ ನೇಮಕಾತಿಗಾಗಿ ಈ ಮುಂದಿನ ಸದಸ್ಯರುಗಳ ಒಂದು ಆಯ್ಕೆ ಸಮಿತಿಯನ್ನು ಒಳಗೊಂಡಿರತಕ್ಕದ್ದು, ಎಂದರೆ :-

| | | |
|---|---|---|
| (1) | ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | : ಅಧ್ಯಕ್ಷರು |
| (2) | ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | : ಸದಸ್ಯರು |
| (3) | ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಜಂಟಿ ನಿರ್ದೇಶಕರ ದರ್ಜೆಗಿಂತ ಕಡಿಮೆಯಿರದ ದರ್ಜೆಯ ಅವರ ಪ್ರತಿನಿಧಿಗಳು | : ಸದಸ್ಯರು |
| (4) | ನಿರ್ದೇಶಕರು, ಬುಡಕಟ್ಟು ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (5) | ನಿರ್ದೇಶಕರು, ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (6) | ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (7) | ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (8) | ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತಾಲಯ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | : ಸದಸ್ಯ ಕಾರ್ಯದರ್ಶಿ |

4. **ಅರ್ಜಿಗಳನ್ನು ಆಹ್ವಾನಿಸುವುದು.**- ಆಯ್ಕೆ ಸಮಿತಿಯು, ಈ ನಿಯಮಗಳ ಮೇರೆಗೆ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಪರಿಗಣನೆಗೆ ತೆಗೆದುಕೊಂಡ ತರುವಾಯ, ಅರ್ಹ ಷರತ್ತುಗಳು, ಆಯ್ಕೆಯ ಸ್ವರೂಪ, ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳ ಸಂಖ್ಯೆ

ಹಾಗೂ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನು ಅಥವಾ ಯಾವುದೇ ಆದೇಶದ ಮೂಲಕ ಅಥವಾ ಅದರ ಮೇರೆಗೆ ಒದಗಿಸಲಾದ ಹುದ್ದೆಗಳ ಮೀಸಲಾತಿಗೆ ಅನುಸಾರವಾಗಿರುವ ವರ್ಗೀಕರಣವನ್ನು ನಿರ್ದಿಷ್ಟಪಡಿಸಿ ಅಧಿಕೃತ ರಾಜ್ಯಪತ್ರದಲ್ಲಿ ಖಾಲಿ ಹುದ್ದೆಗಳನ್ನು ಜಾಹೀರಾತುಪಡಿಸಿ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವುದು. ಅಂಥ ಜಾಹೀರಾತಿನ ಸಾರಂಶವನ್ನು ರಾಜ್ಯದಲ್ಲಿ ವ್ಯಾಪಕ ಪ್ರಚಾರವನ್ನು ಹೊಂದಿರುವ ಒಂದಕ್ಕಿಂತ ಹೆಚ್ಚಿನ ದಿನಪತ್ರಿಕೆಗಳಲ್ಲಿ ಅಧಿಸೂಚಿಸಬೇಕು. ಅದರಲ್ಲಿ ಒಂದು ಕನ್ನಡ ದಿನಪತ್ರಿಕೆಯಲ್ಲಿ ಪ್ರಕಟಿಸತಕ್ಕದ್ದು.

೫. **ಕನ್ನಡ ಭಾಷಾ ಜ್ಞಾನ**.- ಅಭ್ಯರ್ಥಿಯು, ಗರಿಷ್ಠ 150 ಅಂಕಗಳನ್ನು ಹೊಂದಿರುವ ಒಂದು ಪತ್ರಿಕೆಯನ್ನು ಒಳಗೊಂಡಿರುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅವನು ಅರ್ಹನಾಗದ ಹೊರತು ಹಾಗೂ ಕನ್ನಡ ಭಾಷಾ ಜ್ಞಾನಕ್ಕೆ ಸಂಬಂಧಿಸಿದಂತೆ ಸದರಿ ಅರ್ಹತಾ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಪಡೆಯದ ಹೊರತು ಪಶುವೈದ್ಯಕೀಯ ಪರೀಕ್ಷಕರುಗಳ ಮತ್ತು ಪಶುವೈದ್ಯಕೀಯ ಸಹಾಯಕರುಗಳ ಹುದ್ದೆಗೆ ಆಯ್ಕೆ ಪಟ್ಟಿಯಲ್ಲಿ ಅವನ ಹೆಸರನ್ನು ಸೇರಿಸಲು ಅರ್ಹನಾಗತಕ್ಕದ್ದಲ್ಲ. ಈ ಪತ್ರಿಕೆಯ ಗುಣಮಟ್ಟವು, ಎಸ್.ಎಸ್.ಎಲ್.ಸಿ ಮಟ್ಟದ ಕನ್ನಡ ಪ್ರಥಮ ಭಾಷೆಯದ್ದಾಗಿರತಕ್ಕದ್ದು.

ಪರಂತು, ಸಮಿತಿಯು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಥವಾ ಯಾವುದೇ ತತ್ಸಮಾನ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಅದರಲ್ಲಿ ಒಂದು ವಿಷಯ ಸಂಯುಕ್ತ ಪತ್ರಿಕೆಯಾಗಿರಬಾರದು ತೆಗೆದುಕೊಂಡು ಉತ್ತೀರ್ಣನಾಗಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾ ತೇರ್ಗಡೆಯಾಗಿದ್ದರೆ ಅಥವಾ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸುವ ಕನ್ನಡ ಭಾ ಪರೀಕ್ಷೆಯಲ್ಲಿ ಈ ಮೊದಲೇ ಉತ್ತೀರ್ಣನಾಗಿದ್ದಲ್ಲಿ ಆ ಅಭ್ಯರ್ಥಿಗೆ ಕನ್ನಡ ಭಾಷಾ ಪರೀಕ್ಷೆಯ ಉತ್ತೀರ್ಣರಾಗಿರುವುದರಿಂದ ವಿನಾಯಿತಿ ನೀಡಬಹುದು.

6. **ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವುದು.**- (1) ಆಯ್ಕೆ ಸಮಿತಿಯು, ಕನ್ನಡ ಭಾ ಪರೀಕ್ಷೆಯಲ್ಲಿ ಅರ್ಹರಾಗಿರುವ ಅಭ್ಯರ್ಥಿಗಳ ಪೈಕಿಯಿಂದ, ಅರ್ಹತಾ ಪರೀಕ್ಷೆಯಲ್ಲಿ ಗಳಿಸಲಾ ಅಂಕಗಳ ಒಟ್ಟು ಶೇಕಡಾವಾರು ಹಾಗೂ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂ ಅಥವಾ ಯಾವುದೇ ಆದೇಶದ ಮೂಲಕ ಅಥವಾ ಅದರ ಮೇರೆಗೆ ಉಪಬಂಧಿಸಿದ ಹುದ್ದೆಗ ಮೀಸಲಾತಿಯ [ಒಂದೇ ಹಂತದ (Horizontal) ಮತ್ತು ಎಲ್ಲಾ ಹಂತದ (Vertical)] ಆಧಾರ ಮೇಲೆ ಈ ನಿಯಮಗಳ ಮೇರೆಗೆ ನೇಮಕಾತಿಗಾಗಿ ಅರ್ಹತಾ ಕ್ರಮದಲ್ಲಿ ಅರ್ಹ ಅಭ್ಯರ್ಥಿಗ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸತಕ್ಕದ್ದು.

(2) (1) ನೇ ಉಪ-ನಿಯಮದ ಮೇರೆಗೆ ಆಯ್ಕೆ ಮಾಡಬಹುದಾದ ಅಭ್ಯರ್ಥಿಗ ಸಂಖ್ಯೆಯು ಅಧಿಸೂಚಿಸಿರುವ ಖಾಲಿ ಹುದ್ದೆಗಳ ಸಂಖ್ಯೆಗೆ ಸಮನಾಗಿರತಕ್ಕದ್ದು.

(3) ಇಬ್ಬರು ಅಥವಾ ಇಬ್ಬರಿಗಿಂತ ಹೆಚ್ಚಿನ ಅಭ್ಯರ್ಥಿಗಳು ಸಮಾನ ಅಂಕಗಳನ್ನು ಪಡೆದುಕೊಂಡಿದ್ದರೆ, ಅಂಥ ಅಭ್ಯರ್ಥಿಗಳ ಸಂಬಂಧದಲ್ಲಿ ಅವರ ವಯಸ್ಸಿನ ಆಧಾರದ ಮೇಲೆ ಹಿರಿಯ ವಯಸ್ಸಿನವನನ್ನು, ಕಿರಿಯ ವಯಸ್ಸಿನವನಿಗಿಂತ ಮೇಲಿನ ಸ್ಥಾನಕ್ಕೆ ಅರ್ಹತಾ ಕ್ರಮದಲ್ಲಿ ನಿಗದಿಪಡಿಸತಕ್ಕದ್ದು. ಅಂಥ ಅರ್ಹ ಅಭ್ಯರ್ಥಿಗಳ ಪಟ್ಟಿಯಲ್ಲಿ ಸೇರಿಸಬಹುದಾದ ಅಭ್ಯರ್ಥಿಗಳ ಸಂಖ್ಯೆಯು, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಖಾಲಿ ಹುದ್ದೆಗಳ ಸಂಖ್ಯೆಗ ಸಮನಾಗಿರತಕ್ಕದ್ದು.

(4) ಆಯ್ಕೆ ಸಮಿತಿಯು, (1)ನೇ ಉಪ-ನಿಯಮದ ಮೇರೆಗೆ ಸಿದ್ಧಪಡಿಸಿರುವ ಮುಖ್ಯ ಪಟ್ಟಿಯಲ್ಲಿ ಒಳಗೊಳ್ಳದಿರುವಂಥ ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಯನ್ನು ಸಿದ್ಧಪಡಿಸತಕ್ಕದ್ದು. ಹೆಚ್ಚುವರಿ ಪಟ್ಟಿಯಲ್ಲಿ ಸೇರಿಸಬೇಕಾದ ಅಭ್ಯರ್ಥಿಗಳ ಸಂಖ್ಯೆಯು, (1) ನೇ ಉಪ-ನಿಯಮದ ಮೇರೆಗೆ ಸಿದ್ಧಪಡಿಸಿರುವ ಪಟ್ಟಿಯಲ್ಲಿ ಪ್ರತಿಯೊಂದು ಮೀಸಲು ಪ್ರವರ್ಗಗಳಲ್ಲಿನ [ಒಂದೇ ಹಂತದ (Horizontal) ಮತ್ತು ಎಲ್ಲಾ ಹಂತದ (Vertical)] ಅಭ್ಯರ್ಥಿಗಳ ಸಂಖ್ಯೆಯಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಶೇಕಡಾ 20 ರಷ್ಟಿರತಕ್ಕದ್ದು. (1) ನೇ ಉಪ-ನಿಯಮದ ಮೇರೆಗೆ ಹೆಚ್ಚುವರಿ ಪಟ್ಟಿಯಲ್ಲಿ

ಪ್ರತಿಯೊಂದು ಮೀಸಲಾತಿ ಪ್ರವರ್ಗ [ಒಂದೇ ಹಂತದ (Horizontal) ಮತ್ತು ಎಲ್ಲಾ ಹಂತದ (Vertical)] ಗಳಿಗೆ ಸೇರಿದ ಕನಿಷ್ಠ ಪಕ್ಷ ಒಬ್ಬ ಅಭ್ಯರ್ಥಿಯು ಇರತಕ್ಕದ್ದು. (1) ನೇ ಉಪ-ನಿಯಮದ ಮೇರೆಗೆ ಪಟ್ಟಿಯಲ್ಲಿ ಹೆಸರನ್ನು ಸೇರಿಸಿರುವ ಅಭ್ಯರ್ಥಿಯು ಗೊತ್ತುಪಡಿಸಿರುವ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ವಿಫಲನಾದಲ್ಲಿ, ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ವಿಫಲನಾದ ಅಭ್ಯರ್ಥಿಯ ಸ್ಥಾನಕ್ಕೆ ಹೆಚ್ಚುವರಿ ಪಟ್ಟಿಯಲ್ಲಿರುವ ಅದೇ ಮೀಸಲಾತಿ ಪ್ರವರ್ಗಕ್ಕೆ ಸೇರಿದ ಅಭ್ಯರ್ಥಿಯನ್ನು ನೇಮಕ ಮಾಡತಕ್ಕದ್ದು.

(5) (1) ಮತ್ತು (4) ನೇ ಉಪ-ನಿಯಮಗಳ ಮೇರೆಗೆ, ಹಾಗೆ ಸಿದ್ಧಪಡಿಸಿರುವ ಪಟ್ಟಿಗಳನ್ನು ಅಧಿಕೃತ ರಾಜ್ಯಪತ್ರದಲ್ಲಿ ಮತ್ತು ಆಯುಕ್ತರ ಕಚೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸತಕ್ಕದ್ದು.

(6) ವಿಶೇಷ ಸಮಿತಿಯು ಆಯ್ಕೆ ಮಾಡಿದ ಹಾಗೂ ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸಿರುವ ಅಭ್ಯರ್ಥಿಗಳ ಪಟ್ಟಿಯು, ಎಲ್ಲಾ ಅಧಿಸೂಚಿತ ಖಾಲಿ ಸ್ಥಾನಗಳನ್ನು ಭರ್ತಿ ಮಾಡುವವರೆಗೆ ಅಥವಾ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ ಒಂದು ವರ್ಷ ಪೂರ್ಣಗೊಳ್ಳುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸಿಂಧುವಾಗಿರತಕ್ಕದ್ದು.

7. **ಅಭ್ಯರ್ಥಿಗಳ ನೇಮಕಾತಿ**.- (1) 6ನೇ ನಿಯಮದ ಮೇರೆಗೆ ಸಿದ್ಧಪಡಿಸಿರುವ ಆಯ್ಕೆ ಪಟ್ಟಿಯಲ್ಲಿ ಸೇರಿಸಿರುವ ಹೆಸರುಗಳ ಅಭ್ಯರ್ಥಿಗಳನ್ನು ನೇಮಕಾತಿ ಪ್ರಾಧಿಕಾರವು ತಾನು ಅವಶ್ಯಕವೆಂದು ಭಾವಿಸಬಹುದಾದಂಥ ವಿಚಾರಣೆಯನ್ನು ಮಾಡಿದ ತರುವಾಯ ನೇಮಕಾತಿಗೆ ಪ್ರತಿಯೊಬ್ಬ ಅಭ್ಯರ್ಥಿಯು ಎಲ್ಲಾ ರೀತಿಯಿಂದಲೂ ಸೂಕ್ತನಾಗಿರುವನೆಂದು ಮನದಟ್ಟಾದ ತರುವಾಯ, ಪಟ್ಟಿಯಲ್ಲಿ ಅವರ ಹೆಸರುಗಳು ಯಾವ ಕ್ರಮದಲ್ಲಿರುವುದೋ ಆ ಪ್ರಕಾರವೇ ಖಾಲಿ ಸ್ಥಾನಗಳಿಗೆ ನೇಮಕ ಮಾಡತಕ್ಕದ್ದು.

(2) 5 ನೇ ನಿಯಮದ ಉಪ-ನಿಯಮ (5) ರ ಮೇರೆಗೆ ಪ್ರಕಟಿಸಿರುವ ಪಟ್ಟಿಯಲ್ಲಿ ಹೆಸರಿರುವ ಅಭ್ಯರ್ಥಿಯ, ನೇಮಕಾತಿಯ ಯಾವುದೇ ಹಕ್ಕನ್ನು ಚಲಾಯಿಸತಕ್ಕದ್ದಲ್ಲ.

8. **ಇತರ ನಿಯಮಗಳ ಅನ್ವಯ.-** ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957, ಕರ್ನಾಟಕ ಸಿವಿಲ್ ಸೇವಾ (ನಡವಳಿಕೆ) ನಿಯಮಗಳು, 1966, ಕರ್ನಾಟಕ ಸಿವಿಲ್ ಸೇವಾ (ಪ್ರೊಬೇಷನ್) ನಿಯಮಗಳು, 1977 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ ಮೇರೆಗೆ ಮಾಡಲಾದ ಅಥವಾ ಮಾಡಲಾಗಿದೆ ಎಂದು ಭಾವಿಸಲಾದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ನಿಯಂತ್ರಿಸುವ ತತ್ಕಾಲದಲ್ಲಿ ಜಾರಿಯಲ್ಲಿರುವ ಎಲ್ಲಾ ಇತರ ನಿಯಮಗಳು ಈ ನಿಯಮಗಳ ಉಪಬಂಧಗಳೊಂದಿಗೆ ಅಂಥ ನಿಯಮಗಳು ಅಸಂಗತವಾಗಿಲ್ಲದಿರುವಷ್ಟರ ಮಟ್ಟಿಗೆ, ಈ ನಿಯಮಗಳ ಮೇರೆಗೆ ಮಾಡಲಾದ ಆಯ್ಕೆ ಹಾಗೂ ನೇಮಕಗೊಂಡ ವ್ಯಕ್ತಿಗಳಿಗೆ ಅನ್ವಯವಾಗತಕ್ಕದ್ದು.

**ಅನುಸೂಚಿ**
**(2ನೇ ನಿಯಮವನ್ನು ನೋಡಿ)**

| ಕ್ರ. ಸಂ. | ಹುದ್ದೆಯ ಪ್ರವರ್ಗ ಮತ್ತು ವೇತನ ಶ್ರೇಣಿ | ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ | ಕನಿಷ್ಠ ವಿದ್ಯಾರ್ಹತೆ |
|---|---|---|---|
| 1 | ಪಶುವೈದ್ಯಕೀಯ ಪರೀಕ್ಷಕರು (ರೂ. 23500-47650) | 32 (ಕಲ್ಯಾಣ-ಕರ್ನಾಟಕ ಪ್ರದೇಶದಲ್ಲಿರುವ ವ್ಯಕ್ತಿಗಳಿಗಾಗಿ, ಅನುಚ್ಛೇದ 371 (ಜೆ) ಪ್ರಕಾರ ಮೀಸಲಿಟ್ಟಿರುವ ಹುದ್ದೆಗಳು) | (1) ಪ್ರಾಣಿಶಾಸ್ತ್ರವನ್ನು ಐ ವಿಷಯವಾಗಿ ಹೊಂದಿರುವ ಬಿ.ಎಸ್ ಪದವಿಯನ್ನು ಪಡೆದಿರಬೇಕು. (2) ಅಗತ್ಯ ಖಾಲಿ ಹುದ್ದೆಗಳಿ ಬಿ.ಎಸ್‌ಸಿ (ಪ್ರಾಣಿಶಾ ಅಭ್ಯರ್ಥಿಗಳು ಲಭ್ಯವಿಲ್ಲ ಸಂದರ್ಭದಲ್ಲಿ, ಯಾವುದೇ ವಿಜ್ಞಾ ಪದವಿಯಲ್ಲಿ, ಪದವಿಯನ ಪಡೆದಿರುವ ಮತ್ತು ಪಿಯುಸಿ ಯ ಐಚ್ಛಿಕ ವಿಷಯವನ್ನಾ ಜೀವಶಾಸ್ತ್ರವನ್ನು ಅಭ್ಯಸಿಸಿದ ಅಭ್ಯರ್ಥಿಗಳನ್ನು ಪರಿಗಣಿಸಬಹುದಾಗಿದೆ. |

| | | | |
|---|---|---|---|
| 2 | ಪಶುವೈದ್ಯಕೀಯ ಸಹಾಯಕರು (ರೂ. 21400-42000) | 83 (ಕಲ್ಯಾಣ-ಕರ್ನಾಟಕ ಪ್ರದೇಶದಲ್ಲಿರುವ ವ್ಯಕ್ತಿಗಳಿಗಾಗಿ, ಅನುಚ್ಛೇದ 371 (ಜೆ) ಪ್ರಕಾರ ಮೀಸಲಿಟ್ಟಿರುವ ಹುದ್ದೆಗಳು) | (1) ಕಾನೂನಿನ ಮೂಲಕ ಸ್ಥಾಪಿಸಲಾದ ಕರ್ನಾಟಕ ಪಶುವೈದ್ಯಕೀಯ ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಥವಾ ಯಾವುದೇ ಇತರ ವಿಶ್ವವಿದ್ಯಾಲಯವು ನಡೆಸಲಾದ ಪಶು ಆರೋಗ್ಯ (ಪಶುಸಂಗೋಪನೆ) ಡಿಪ್ಲೊಮೊ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. |
| | | | (2) ನಿರ್ದೇಶಕರು, ವೃತ್ತಿ ಶಿಕ್ಷಣ ಕರ್ನಾಟಕ ಸರ್ಕಾರವು ನಡೆಸಲಾದ ಡೈರಿಗೆ ಸಂಬಂಧಿಸಿದ 2 ವರ್ಷಗಳ ಉದ್ಯೋಗ ಆಧಾರಿತ ಕೋರ್ಸ್‌ನಲ್ಲಿ ಉತ್ತೀರ್ಣರಾಗಿರಬೇಕು. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

11/2/2020

(ಶರಣಬಸಪ್ಪ ಎಂ. ಮಾಟೂರ)
ಪೀಠಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
11/2/2020

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸುವ ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಒದಗಿಸುವ ಸಲುವಾಗಿ

ಪ್ರತಿ:

1. ಆಯುಕ್ತರು, ಪಶುಪಾಲನೆ & ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪಶುಪಾಲನೆ & ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
3. ಜಂಟಿ ನಿರ್ದೇಶಕರು (ಆಡಳಿತ) ಪಶುಪಾಲನೆ & ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
4. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತ್.
5. ಎಲ್ಲಾ ಜಿಲ್ಲಾಧಿಕಾರಿಗಳು